ಐಹೊಳೆ ಪ್ರವಾಸಿ ಕೇಂದ್ರದ ಅಭಿವೃದ್ಧಿ

2616 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರವಾಸೋದ್ಯಮ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಗತ್‌ಪ್ರಸಿದ್ಧ ಐತಿಹಾಸಿಕ ಸ್ಥಳವಾದ ಐಹೊಳೆ ಪ್ರವಾಸಿ ಕೇಂದ್ರದ ಅಭಿವೃದ್ಧಿಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಆ) ಪ್ರವಾಸಿ ಸ್ಥಳಗಳನ್ನು ಅಭಿವೃದ್ಧಿಗೊಳಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು,

ಶ್ರೀಮತಿ : ಲೀಲಾದೇವಿ ಆರ್, ಪ್ರಸಾದ್ (ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಪ್ರಸ್ತುತ ಐಹೊಳೆಯಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ ಇಲಾಖೆಯು 10 ಕೊಠಡಿಗಳಿಂದ ಕೂಡಿದ ಪ್ರವಾಸಿ ಗೃಹವನ್ನು ನಿರ್ವಹಿಸುತ್ತಿದೆ. ಕೇಂದ್ರ ಧನಸಹಾಯದಿಂದ ರೂ. 30.00ಲಕ್ಷ ಅಂದಾಜು ವೆಚ್ಚದಲ್ಲಿ ಹೆಚ್ಚುವರಿ ವಸತಿ ಸೌಲಭ್ಯ ನಿರ್ಮಿಸಲಾಗುತ್ತಿದೆ.

ಆ) ಪ್ರವಾಸಿ ಸ್ಥಳಗಳನ್ನು ಅಭಿವೃದ್ಧಿಗೊಳಿಸಲು ಪ್ರವಾಸೋದ್ಯಮ ನೀತಿಯನ್ನು ಜಾರಿಗೆ ತರಲಾಗಿದೆ. ಈ ನೀತಿಯನ್ವಯ ಉದ್ದಿಮೆದಾರರು ನಗದು ಸಬ್ಸಿಡಿ, ಮಾರಾಟ ತೆರಿಗೆಯಲ್ಲಿ ವಿನಾಯ್ತಿ, ರಿಯಾಯಿತಿದರದಲ್ಲಿ ವಿದ್ಯುಚ್ಛಕ್ತಿ, ನೋಂದಣಿ ಶುಲ್ಕ ಮತ್ತು ಸ್ಟ್ಯಾಂಪ್ ಶುಲ್ಕದಲ್ಲಿ ರಿಯಾಯಿತಿ ಪಡೆಯುತ್ತಾರೆ. ಅಲ್ಲದೆ ಇಲಾಖೆ ವತಿಯಿಂದ ಸಂಕೀರ್ಣಗಳನ್ನು ನಿರ್ಮಿಸಲಾಗುತ್ತಿದೆ. ಹಾಗೂ ಐಹೊಳೆ ಬಗ್ಗೆ ಪ್ರಚಾರ ಕಾರ್ಯ ಕೈಕೊಳ್ಳಲಾಗುತ್ತಿದೆ.

ಧಾರವಾಡ ಜಿಲ್ಲೆಯಲ್ಲಿರುವ ಪ್ರವಾಸಿ ಸ್ಥಳಗಳು

2617 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾರವಾಡ ಜಿಲ್ಲೆಯಲ್ಲಿರುವ ಪ್ರವಾಸಿ ಸ್ಥಳಗಳಾವುವು?

ಆ) ಪ್ರವಾಸಿ ಸ್ಥಳಗಳನ್ನು ಅಭಿವೃದ್ಧಿಗೊಳಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀಮತಿ : ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಪ್ರವಾಸೋದ್ಯಮ ನೀತಿಯಲ್ಲಿ ಧಾರವಾಡ ಜಿಲ್ಲೆಯ ಈ ಕೆಳಕಂಡ ಸ್ಥಳಗಳನ್ನು ಪ್ರವಾಸೋದ್ಯಮ ಅಭಿವೃದ್ಧಿಗೆ ವಿಶೇಷ ಸ್ಥಳಗಳೆಂದು ಗುರುತಿಸಲಾಗಿದೆ :

1) ಗದಗ್ 2) ಲಕ್ಕುಂಡಿ

3) ಶಿಗ್ಗಾವಿ 4) ಬಾದ

5) ನರಗುಂದ 6) ಹಾನಗಲ್

7) ಸಿಂಗಟಾಲೂರ್ 8) ಅಬಲೂರು

9) ಕಾಗಿನೆಲೆ.